15ನೇ ಅ
43

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ರವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಸೂಚನೆ**:

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (MUDA) 50:50 ಅನುಪಾತದ ಅಡಿಯಲ್ಲಿ ನಡೆದಿದೆ ಎನ್ನಲಾದ ನಿವೇಶನ ಹಂಚಿಕೆ ಅಕ್ರಮ, ಪಿ.ಎನ್. ದೇಸಾಯಿ ಆಯೋಗದ ತನಿಖೆ ಹಾಗೂ ಸದರಿ ನಿವೇಶನಗಳ ಪರಭಾರೆ (ಮಾರಾಟ/ವರ್ಗಾವಣೆ) ತಡೆಯುವಲ್ಲಿ ಆದ ಲೋಪಗಳ ಕುರಿತು ನಿಯಮ 330ರ ಅಡಿಯಲ್ಲಿ ಮಾನ್ಯ ನಗರಾಭಿವೃದ್ಧಿ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ 50:50ರ ಅನುಪಾತದಡಿ ಅಕ್ರಮವಾಗಿ ನಿವೇಶನಗಳನ್ನು ಹಂಚಿಕೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯ ಪ್ರಕರಣದಲ್ಲಿ ನಡೆದಿರುವ ಅಕ್ರಮಗಳಿಗೆ ಸಂಬಂಧಿಸಿದಂತೆ ಮಾನ್ಯ ನಿವೃತ್ತ ನ್ಯಾಯಾಧೀಶರಾದ ಶ್ರೀ ಪಿ.ಎನ್. ದೇಸಾಯಿ ಇವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ವಿಚಾರಣಾ ಆಯೋಗವನ್ನು ರಚಿಸಲಾಗಿತ್ತು. ಮಾನ್ಯ ಏಕ ಸದಸ್ಯ ಆಯೋಗವು ದಿನಾಂಕ:30.07.2025 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ.

ಮಾನ್ಯ ಶ್ರೀ ಪಿ.ಎನ್. ದೇಸಾಯಿ ರವರ ನೇತೃತ್ವದಲ್ಲಿ ರಚಿಸಲಾಗಿದ್ದ ವಿಚಾರಣಾ ಆಯೋಗದ ವಿಚಾರಣಾ ವರದಿಯು ಸರ್ಕಾರಕ್ಕೆ ಸ್ವೀಕೃತಗೊಂಡ ನಂತರ ಸದರಿ ವಿಚಾರಣಾ ವರದಿಯನ್ನು ಸಚಿವ ಸಂಪುಟದ ಮುಂದೆ ಮಂಡಿಸಲಾಗಿತ್ತು.

ಸದರಿ ವಿಚಾರಣಾ ವರದಿಯನ್ನು ಸಚಿವ ಸಂಪುಟ ಅನುಮೋದಿಸಿದ ನಂತರ ಮಾನ್ಯ ಏಕಸದಸ್ಯ ವಿಚಾರಣಾ ಆಯೋಗವು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯನ್ನು ಸಮಗ್ರವಾಗಿ ಪರಿಶೀಲಿಸಿ, ವಿಚಾರಣಾ ವರದಿಯಲ್ಲಿನ ಪ್ರತಿಯೊಂದು ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಕ್ರಮದ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲು ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ತಾಂತ್ರಿಕ ಸಮಿತಿಯನ್ನು ರಚಿಸಿ ಉನ್ನತ ಮಟ್ಟದ ತಾಂತ್ರಿಕ ಸಮಿತಿಗೆ ವಹಿಸಬಹುದಾದ ಕಾರ್ಯವ್ಯಾಪ್ತಿ ಮತ್ತು ಷರತ್ತುಗಳನ್ನು ನಿಗದಿಪಡಿಸಲಾಗಿರುತ್ತದೆ.

ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ಮಾನ್ಯ ಏಕಸದಸ್ಯ ವಿಚಾರಣಾ ವರದಿಯಲ್ಲಿನ ಶಿಫಾರಸ್ಸಿನಂತೆ ತುರ್ತಾಗಿ ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ವರದಿ ಸಲ್ಲಿಸಿರುತ್ತದೆ.

ಉನ್ನತ ಮಟ್ಟದ ತಾಂತ್ರಿಕ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನಂತೆ ಸರ್ಕಾರದ ಪತ್ರ ಸಂಖ್ಯೆ: ನಅಇ 71 ಮೈಅಪ್ರಾ 2023(ಇ), ದಿನಾಂಕ:14-03-2023ರ ನಿರ್ದೇಶನವನ್ನು ಉಲ್ಲಂಘಿಸಿ ಬದಲಿ ನಿವೇಶನಗಳನ್ನು ಹಂಚಿಕೆ ಮಾಡಿರುವ ಎಲ್ಲಾ ಹಂಚಿಕೆ ಆದೇಶಗಳನ್ನು ರದ್ದುಪಡಿಸಲು ಕ್ರಮವಹಿಸುವಂತೆ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಮತ್ತು ಆಯುಕ್ತರು, ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಗೆ ನಿರ್ದೇಶನ ನೀಡಲಾಗಿದೆ.

ಮಾನ್ಯ ಏಕಸದಸ್ಯ ವಿಚಾರಣಾ ವರದಿಯಲ್ಲಿನ ಶಿಫಾರಸ್ಸುಗಳ ಪ್ರತಿಯೊಂದು ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಕ್ರಮದ ಕುರಿತು ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ಪರಿಶೀಲಿಸಿ, ವರದಿ ಸಲ್ಲಿಸುವ ಪ್ರಕ್ರಿಯೆಯು ಜಾರಿಯಲ್ಲಿದೆ.

ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ಮಾನ್ಯ ಏಕಸದಸ್ಯ ವಿಚಾರಣಾ ವರದಿಯಲ್ಲಿನ ಶಿಫಾರಸ್ಸುಗಳ ಪ್ರತಿಯೊಂದು ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಕ್ರಮದ ಕುರಿತ ವರದಿಯು ಸರ್ಕಾರಕ್ಕೆ ಸ್ವೀಕೃತವಾದ ನಂತರ ಸದರಿ ವರದಿಯನ್ನಾಧರಿಸಿ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.

**ಸಂಖ್ಯೆ: ನಅಇ 364 ಮೈಅಪ್ರಾ 2026**

**(ಡಾ. ಯತೀಂದ್ರ ಸಿದ್ದರಾಮಯ್ಯ)**
ನಗರಾಭಿವೃದ್ಧಿ ಸಚಿವರು